1	2	3	4	5	6
ನಾಗಾಪುರ	125	5	–	1	4
ವೀರನ ಹೊಸಹಳ್ಳಿ	125	5	–	–	5
ಒಟ್ಟು	**675**	**27**	**03**	**03**	**21**

ಈ) ಹೌದು

ಉ) ಇಲಾಖೆಯ ವ್ಯಂದ ಮತ್ತು ನೇಮಕಾತಿ ನಿಯಮಗಳ ರಚನೆ ಆದ ನಂತರ ಖಾಲಿ ಇರುವ ಆಶ್ರಮ ಶಾಲಾ ಶಿಕ್ಷಕರ ಹುದ್ದೆಗಳನ್ನು ಖಾಯಂ ತಳಹದಿಯ ಮೇಲೆ ನೇಮಕ ಮಾಡಲು ಕ್ರಮವಹಿಸಲಾಗುವುದು. ಹಾಲಿ ಇಡಿಗಂಟು ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕರ ಗೌರವ ಧನವನ್ನು ಹೆಚ್ಚಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಇಡಿಗಂಟು ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರನ್ನು ಖಾಯಂ ಮಾಡುವ ಪ್ರಸ್ತಾವನೆ ಇರುವುದಿಲ್ಲ.

930 ಶ್ರೀ ಮಂಜುನಾಥ್ ಹೆಚ್.ಪಿ. (ಹುಣಸೂರು) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪನೆ ಅಥವಾ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಳಾಂತರ ಮಾಡಲು ಮತ್ತು ಸಮುದಾಯ ಆರೋಗ್ಯ ಕೇಂದ್ರ ಅಥವಾ ಸಾರ್ವಜನಿಕ ಆಸ್ಪತ್ರೆಗಳಾಗಿ ಪರಿವರ್ತಿಸಲು ಸರ್ಕಾರಿ ಸುತ್ತೋಲೆಗಳನ್ವಯ ಇರುವ ಮಾನದಂಡ/ನಿಯಮಗಳೇನು;

ಆ) ಮೈಸೂರು ಜಿಲ್ಲೆ ಹುಣಸೂರು ತಾಲ್ಲೂಕಿನಲ್ಲಿ ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪನೆ ಅಥವಾ ಸ್ಥಳಾಂತರದ ಬಗ್ಗೆ ಪ್ರಸ್ತಾವನೇಯು ಸರ್ಕಾರದ ಪರಿಶೀಲನೆಯಲ್ಲಿ ಇದೆಯೇ; ವಿವರ ನೀಡುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳನ್ನು ಸ್ಥಾಪನೆ ಮಾಡಲು ಜನಸಂಖ್ಯೆಯ ಆಧಾರವನ್ನು ಪರಿಗಣಿಸಲಾಗುವುದು. 2001ರ ಜನಗಣತಿ ಪ್ರಕಾರ 30,000 ಜನಸಂಖ್ಯೆ ಹಾಗೂ ಬುಡಕಟ್ಟು ಮತ್ತು ಗುಡ್ಡಗಾಡು ಪ್ರದೇಶಗಳಲ್ಲಿ 20,000 ಜನಸಂಖ್ಯೆಗೆ ಒಂದರಂತೆ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಹಾಗೂ ಅದೇ ರೀತಿಯಾಗಿ ಸಮುದಾಯ ಆರೋಗ್ಯ ಕೇಂದ್ರವನ್ನು 1,20,000 ಜನಸಂಖ್ಯೆಗೆ ಒಂದರಂತೆ ಮಂಜೂರು ಮಾಡಲು ಅವಕಾಶವಿದೆ. ಸದರಿ ಆರೋಗ್ಯ ಕೇಂದ್ರಗಳನ್ನು ಸ್ಥಳಾಂತರಿಸುವ/ಪರಿವರ್ತಿಸುವ ಕುರಿತು ನಿರ್ದಿಷ್ಟ ಮಾನದಂಡ/ಆದೇಶ ಇರುವುದಿಲ್ಲ.

ಆ) ಮಾರ್ಗಸೂಚಿಗಳ ಪ್ರಕಾರ, ಹುಣಸೂರು ತಾಲ್ಲೂಕಿನಲ್ಲಿ 11 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಬೇಕಾಗಿದ್ದು, ಈಗಾಗಲೇ 22 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತೇವೆ. ಆದ್ದರಿಂದ ಸದರಿ ತಾಲ್ಲೂಕಿಗೆ ಹೆಚ್ಚಿನ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲ.

ಗಿರಿಜನ ಕ್ಲಸ್ಟರ್ ಹಾಡಿಗಳ ಅಭಿವೃದ್ಧಿ ಕುರಿತು

931(405) ಶ್ರೀ ಹೆಚ್.ಪಿ. ಮಂಜುನಾಥ್ (ಹುಣಸೂರು) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭಾರತ ಸರ್ಕಾರದ ಗಿರಿಜನ ವ್ಯವಹಾರಗಳ ಮಂತ್ರಾಲಯ ಹಾಗೂ ರಾಜ್ಯ ಸರ್ಕಾರದಿಂದ ಮೈಸೂರು ಜಿಲ್ಲೆಯ ಹಾಡಿಗಳ ಅಭಿವೃದ್ಧಿಗೆ "ಕ್ಲಸ್ಟರ್ ಗ್ರಾಮ" ರೂಪದಲ್ಲಿ ಹಾಡಿಗಳನ್ನು ಆಯ್ಕೆ ಮಾಡಿದ್ದು, ಸದರಿ ಕಾರ್ಯಕ್ರಮದ ಪರಿಕಲ್ಪನೆ ಹಾಗೂ ಯೋಜನಾ ವರದಿಯ ಮುಖ್ಯಾಂಶವೇನು;

ಆ) ಈ ಯೋಜನೆ ಪ್ರಾರಂಭವಾದಾಗಿನಿಂದಲೂ ಮೈಸೂರು ಜಿಲ್ಲೆಯಲ್ಲಿ ಯಾವ ಯಾವ ಹಾಡಿಗಳನ್ನು ಕ್ಲಸ್ಟರ್ ಗ್ರಾಮಗಳನ್ನಾಗಿ ಆಯ್ಕೆ ಮಾಡಲಾಗಿದೆ, ತಾಲ್ಲೂಕುವಾರು ವಿವರ ನೀಡುವುದು;

ಇ) ಹುಣಸೂರು ತಾಲ್ಲೂಕಿಗೆ ಸಂಬಂಧಿಸಿದಂತೆ ಕ್ಲಸ್ಟರ್ ಗ್ರಾಮಗಳ ಅಭಿವೃದ್ಧಿಗಾಗಿ ಪ್ರಾರಂಭದಿಂದಲೂ ಮಂಜೂರಾಗಿರುವ ಅನುದಾನ ಹಾಗೂ ಕೈಗೊಂಡಿರುವ ಕಾಮಗಾರಿಗಳ ವಿವರಗಳೇನು; ಹಾಡಿವಾರು ವಿವರ ನೀಡುವುದು?